# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹಾಸನದ ಶ್ರವಣಬೆಳಗೊಳ ಜೈನ್ ಪುಣ್ಯಕ್ಷೇತ್ರಗಳಲ್ಲಿ ಸಮಗ್ರ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. 2021-22ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-157.
2. ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 30-06-2021 ರಂದು ಜರುಗಿದ ಸಭೆಯ ನಡುವಳಿ.
3. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಏಕಕಡತ ಸಂಖ್ಯೆ:ಅಸಂನಿ/ಆ.ಭಾ-157/ಜೈ.ಕಾ/ಸಿಆರ್-/2021-22.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ 2021-22ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಜೈನಕಾಶಿ ಎಂದೇ ಪ್ರಸಿದ್ಧವಾದ ಹಾಸನದ ಶ್ರವಣಬೆಳಗೊಳ ಮತ್ತಿತರ ಜೈನ ಪುಣ್ಯಕ್ಷೇತ್ರಗಳಲ್ಲಿ ವಸತಿ ಗೃಹಗಳು, ಪಾದಚಾರಿ ರಸ್ತೆಗಳು ಮತ್ತು ಇತರೆ ಮೂಲಭೂತ ಸೌಕರ್ಯಗಳನ್ನು 50.00 ಕೋಟಿ ರೂ. ವೆಚ್ಚದಲ್ಲಿ ಹಂತ ಹಂತವಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. 2021-22ನೇ ಸಾಲಿನಲ್ಲಿ 20.00 ಕೋಟಿ ರೂ.ಗಳನ್ನು ಈ ಉದ್ದೇಶಕ್ಕಾಗಿ ಒದಗಿಸಲಾಗುವುದೆಂದು ಘೋಷಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2) ರಲ್ಲಿ ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 30-06-2021 ರಂದು ಜರುಗಿದ ಸಭೆಯ ನಿರ್ಣಯಗಳಂತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ನಿರ್ಧರಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿ ಶ್ರವಣಬೆಳಗೊಳದಲ್ಲಿ ಕೈಗೊಳ್ಳಲು ಉದ್ದೇಶಿಸಲಾಗಿರುವ ಕಾಮಗಾರಿಗಳ ರೂ. 22.87 ಕೋಟಿಗಳಿಗೆ ಅಂದಾಜು ವೆಚ್ಚ/ನೀಲಿನಕ್ಷೆಯನ್ನು ಮತ್ತು ಕ್ರಿಯಾ ಯೋಜನೆಯನ್ನು ಶ್ರವಣಬೆಳಗೊಳ ದಿಗಂಬರ ಜೈನ್ ಮಠದ ಸಂಸ್ಥೆಗಳ ಆಡಳಿತ ಮಂಡಳಿ ಟ್ರಸ್ಟ್(ರಿ), ಶ್ರೀಕ್ಷೇತ್ರ ಶ್ರವಣಬೆಳಗೊಳರವರು ತಯಾರಿಸಿದ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆರವರಿಂದ ಪಡೆದು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ರವರು ಸರ್ಕಾರಕ್ಕೆ ಏಕಕಡತ ಪದ್ಧತಿಯನ್ವಯ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:MWD 391 MDS 2021, ಬೆಂಗಳೂರು, ದಿನಾಂಕ: 10.11.2021.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರವಣಬೆಳಗೊಳ ದಿಗಂಬರ ಜೈನ್ ಮಠದ ಸಂಸ್ಥೆಗಳ ಆಡಳಿತ ಮಂಡಳಿ ಟ್ರಸ್ಟ್(ರಿ), ಶ್ರೀಕ್ಷೇತ್ರ ಶ್ರವಣಬೆಳಗೊಳರವರು ಹಾಸನ ಜಿಲ್ಲೆ ಶ್ರವಣಬೆಳಗೊಳ ಜೈನ ಪುಣ್ಯ ಕ್ಷೇತ್ರದ ಫೇಸ್-1 ರಲ್ಲಿ ಕೈಗೊಳ್ಳಬೇಕಾಗಿರುವ ಮೂಲಭೂತ ಸೌಕರ್ಯಗಳಿಗೆ ತಯಾರಿಸಿ ಸಲ್ಲಿಸಿರುವ ರೂ.22.87 ಕೋಟಿಗಳಿಗೆ ಅಂದಾಜು ವೆಚ್ಚ/ನೀಲಿನಕ್ಷೆಯನ್ನು ಮತ್ತು ಕ್ರಿಯಾ ಯೋಜನೆಗೆ ಸಂಬಂಧಿಸಿದಂತೆ ರೂ.10.00 ಕೋಟಿಗಳ ಅನುದಾನವನ್ನು ಮಂಜೂರು ಮಾಡಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರಿಗೆ ಆದೇಶಿಸಿದೆ.

**ಷರತ್ತುಗಳು:**

1. ಈ ಅನುದಾನವನ್ನು ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆರವರಿಗೆ ಬಿಡುಗಡೆಗೊಳಿಸತಕ್ಕದ್ದು.
2. ಅನುದಾನದ ಸದ್ಬಳಕೆಯಾಗಿರುವ ಕುರಿತಂತೆ ನಿಯಮಾನುಸಾರ ಪರಿಶೀಲಿಸಿ ಖಚಿತಪಡಿಸಿಕೊಳ್ಳತಕ್ಕದ್ದು ಹಾಗೂ ಅನುದಾನದ ಬಳಕೆ ಮಾಡಿದ ಬಗ್ಗೆ ಹಣ ಉಪಯುಕ್ತತೆ ಪ್ರಮಾಣಪತ್ರವನ್ನು ದಾಖಲೆಗಳೊಂದಿಗೆ ನೀಡುವುದು.
3. ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:30-06-2021 ರಂದು ಜರುಗಿದ ಸಭೆಯ ನಿರ್ಣಯಗಳಂತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು 2021-22ನೇ ಸಾಲಿನ ಲೆಕ್ಕ ಶೀರ್ಷಿಕೆ 2225-04-102-0-05(103) ಜೈನ್, ಬೌದ್ಧ ಮತ್ತು ಸಿಖ್ ಸಮುದಾಯದ ಅಭಿವೃದ್ಧಿ, ರಾಜ್ಯವಲಯ ಯೋಜನೆಯಡಿ ಒದಗಿಸಲಾದ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: FD 443 EXP-3/2021, ದಿ:11.10.2021 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: PDS 32 IPR 2021, ದಿ:05.10.2021 ರಲ್ಲಿ ನೀಡಿರುವ ಸಹಮತಿ ಅನ್ವಯ ಹಾಗೂ ಸರ್ಕಾರಿ ಆದೇಶ ಸಂಖ್ಯೆ: FD 01 TFP 2021, ದಿನಾಂಕ:05.04.2021 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾದ ಅಧಿಕಾರದನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

10/11/2021

**(ಮುಕ್ತಾರ್ ಪಾಷ ಹೆಚ್.ಜಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, 20ನೇ ಮಹಡಿ, ವಿ.ವಿ.ಗೋಪುರ, ಬೆಂಗಳೂರು.
4. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
5. ನಿರ್ದೇಶಕರು, ಯೋಜನಾ ಇಲಾಖೆ (ಪಿ.ಎಂ.ಐ ವಿಭಾಗ) ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಉಪಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನ ಸೌಧ, ಬೆಂಗಳೂರು.
8. ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ.
9. ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಹಾಸನ ಜಿಲ್ಲೆ.
10. ಜಿಲ್ಲಾ ಖಜಾನಾಧಿಕಾರಿಗಳು, ಹಾಸನ ಜಿಲ್ಲೆ.
11. ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾಸನ ಜಿಲ್ಲೆ.
12. ಅಧ್ಯಕ್ಷರು, ಶ್ರವಣಬೆಳಗೊಳ ದಿಗಂಬರ ಜೈನ್ ಮಠದ ಸಂಸ್ಥೆಗಳ ಆಡಳಿತ ಮಂಡಳಿ ಟ್ರಸ್ಟ್(ರಿ), ಶ್ರೀಕ್ಷೇತ್ರ ಶ್ರವಣಬೆಳಗೊಳ.
13. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
14. ಸಮನ್ವಯಾಧಿಕಾರಿ, ಅಲ್ಪಸಂಖ್ಯಾತರ ಸಹಾಯವಾಣಿ ಕೇಂದ್ರ (24*7), ವಸಂತನಗರ, ಬೆಂಗಳೂರು.
15. ರಕ್ಷಾ ಕಡತ/ಹೆಚ್ಚುವರಿ ಪ್ರತಿ.

## ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ಇವರ ನಡವಳಿಗಳು

**ವಿಷಯ:** ಹಾಸನದ ಶ್ರವಣಬೆಳಗೊಳ ಜೈನ್ ಪುಣ್ಯಕ್ಷೇತ್ರಗಳಲ್ಲಿ ಸಮಗ್ರ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅನುದಾನ ಬಿಡುಗಡೆ ಮಾಡುವ ಕುರಿತು

**ಉಲ್ಲೇಖ:**
1. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 159 ಎಂಡಿಎಸ್ 2021, ಬೆಂಗಳೂರು ದಿ: 12.04.2021.
2. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 159 ಎಂಡಿಎಸ್ 2021, ಬೆಂಗಳೂರು ದಿ:27.04.2021, 01.07.2021 & 22.10.2021.
3. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 391 ಎಂಡಿಎಸ್ 2021 ದಿನಾಂಕ: 10.11.2021.

<>>()<<>

**ಪ್ರಸ್ತಾವನೆ:-**

ಉಲ್ಲೇಖ(1) ಮತ್ತು (2)ರ ಸರ್ಕಾರಿ ಆದೇಶದಲ್ಲಿ ಅಲ್ಪಸಂಖ್ಯಾತರ ನಿರ್ದೇಶನಾಲಯಕ್ಕೆ 2020-21ನೇ ಆರ್ಥಿಕ ಸಾಲಿನಲ್ಲಿ ಚಾಲ್ತಿಯಲ್ಲಿದ ಯೋಜನೆಗಳನ್ನು 2021-22ನೇ ಸಾಲಿಗೆ ಮುಂದುವರೆಸಲಾಗಿದೆ. ಅದರಲ್ಲಿ ಜೈನ್, ಬೌದ್ಧ ಮತ್ತು ಸಿಖ್ ಸಮುದಾಯದ ಅಭಿವೃದ್ಧಿ ಯೋಜನೆಗೆ ರೂ. 2500.00 ಲಕ್ಷಗಳನ್ನು ಒದಗಿಸಲಾಗಿದೆ. ಸದರಿ ಯೋಜನೆಗಳಿಗೆ 2021-22ನೇ ಸಾಲಿನಲ್ಲಿ ಮಂಜೂರಾಗಿರುವ ಆಯವ್ಯಯದಲ್ಲಿ ಮೊದಲನೇ, ಎರಡನೇ ಮತ್ತು ಮೂರನೇ ತ್ರೈಮಾಸಿಕ ಕಂತಿನ ಅನುದಾನ ರೂ. 1875.00 ಲಕ್ಷಗಳನ್ನು ಬಿಡುಗಡೆ ಮಾಡಿ ಆದೇಶಿಸಿದೆ.

ಉಲ್ಲೇಖ (3)ರ ಸರ್ಕಾರದ ಆದೇಶದಲ್ಲಿ ಶ್ರವಣಬೆಳಗೊಳ ದಿಗಂಬರ ಜೈನ್ ಮಠದ ಸಂಸ್ಥೆಗಳ ಆಡಳಿತ ಮಂಡಳಿ ಟ್ರಸ್ಟ್ (ರಿ), ಶ್ರೀ ಕ್ಷೇತ್ರ ಶ್ರವಣಬೆಳಗೊಳರವರು ಹಾಸನ ಜಿಲ್ಲೆ ಶ್ರವಣಬೆಳಗೊಳ ಜೈನ್ ಪುಣ್ಯ ಕ್ಷೇತ್ರದ ಫೇಸ್-1 ರಲ್ಲಿ ಕೈಗೊಳ್ಳಬೇಕಾಗಿರುವ ಮೂಲಭೂತ ಸೌಕರ್ಯಗಳಿಗೆ ತಯಾರಿಸಿ ಸಲ್ಲಿಸಿರುವ ರೂ. 22.87 ಕೋಟಿಗಳಿಗೆ ಅಂದಾಜು ವೆಚ್ಚ /ನೀಲಿನಕ್ಷೆಯನ್ನು ಮತ್ತು ಕ್ರಿಯಾ ಯೋಜನೆಗೆ ಸಂಬಂಧಿಸಿದಂತೆ ರೂ. 10.00 ಕೋಟಿಗಳ ಅನುದಾನವನ್ನು ಮಂಜೂರು ಮಾಡಿ ಬಿಡುಗಡೆ ಮಾಡಲು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರಿಗೆ ಆದೇಶಿಸಿದೆ.

ಈ ಪೈಕಿ ಶ್ರವಣಬೆಳಗೊಳ ದಿಗಂಬರ ಜೈನ್ ಮಠದ ಸಂಸ್ಥೆಗಳ ಆಡಳಿತ ಮಂಡಳಿ ಟ್ರಸ್ಟ್ (ರಿ), ಶ್ರೀ ಕ್ಷೇತ್ರ ಶ್ರವಣಬೆಳಗೊಳರವರು ಹಾಸನ ಜಿಲ್ಲೆ ಶ್ರವಣಬೆಳಗೊಳ ಜೈನ್ ಪುಣ್ಯ ಕ್ಷೇತ್ರದ ಫೇಸ್-1 ರಲ್ಲಿ ಕೈಗೊಳ್ಳಬೇಕಾಗಿರುವ ಮೂಲಭೂತ ಸೌಕರ್ಯಗಳಿಗೆ ತಯಾರಿಸಿ ಸಲ್ಲಿಸಿರುವ ರೂ. 22.87 ಕೋಟಿಗಳಿಗೆ ಅಂದಾಜು ವೆಚ್ಚ /ನೀಲಿನಕ್ಷೆಯನ್ನು ಮತ್ತು ಕ್ರಿಯಾ ಯೋಜನೆಗೆ ಸಂಬಂಧಿಸಿದಂತೆ ರೂ. 10.00 ಕೋಟಿ (ರೂ. ಹತ್ತು ಕೋಟಿಗಳು ಮಾತ್ರ)ಗಳನ್ನು ಮಂಜೂರು ಮಾಡಿ ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ ರವರಿಗೆ ಮರು ಬಿಡುಗಡೆ ಮಾಡಲು ಈ ಆದೇಶ.

**ಪು.ತಿ.ನೋ...**

ರವಾನಿಸಿದೆ
ದಿನಾಂಕ 12/11/21